ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಕಳಪೆ ಕಾಮಗಾರಿಗಳ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

658 (829) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್ ಕಾರಣದಿಂದ ಲಾಕ್‌ಡೌನ್ ಹೇರಲ್ಪಟ್ಟ ಸಂದರ್ಭದಲ್ಲಿ ರಾಜ್ಯದ ವಿವಿಧ ನಗರಗಳ ರಸ್ತೆ ಕಾಮಗಾರಿಗಳು ನೆನಗುದಿಗೆ ಬಿದ್ದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಪೂರ್ಣಗೊಂಡ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು;

(ಆ) ರಾಜ್ಯದ ಮುಖ್ಯ ನಗರಗಳಲ್ಲಿ ಕೋವಿಡ್ ಸಂದರ್ಭದಲ್ಲಿ ತಡೆಹಿಡಿಯಲಾಗಿದ್ದ ಕಾಮಗಾರಿಗಳಿಂದ ರಾಜ್ಯದ ಬೊಕ್ಕಸಕ್ಕೆ ಉಳಿತಾಯವಾಗಿದೆಯೇ; (ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಕೆಲವು ರಸ್ತೆ ಮತ್ತು ಮೂಲಸೌಕರ್ಯ ಕಾಮಗಾರಿಯ ಗುತ್ತಿಗೆದಾರರು ನಗರಾಭಿವೃದ್ಧಿಯ ವಿವಿಧ ಯೋಜನೆಗಳಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ನಿರ್ವಹಿಸಿ ಬಿಲ್ ಪಾವತಿ ಮಾಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ನೀಡುವುದು)